# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(3ಎ)ಪಿಆರ್/21 /2022–23

ಮುಖ್ಯ ಆಯುಕ್ತರವರ ಕಛೇರಿ,
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 29/10/2022

## ಕಛೇರಿ ಆದೇಶ

ವಿಷಯ: ಪಾಲಿಕೆಯ ಇಲಾಖಾ ವಿಚಾರಣೆ ಪ್ರಕರಣಗಳಲ್ಲಿ ಕಾನೂನು ಅಧಿಕಾರಿಗಳನ್ನು ಮಂಡನಾಧಿಕಾರಿಗಳನ್ನಾಗಿ ನೇಮಕ ಮಾಡುವುದನ್ನು ಕೈಬಿಡುವ ಬಗ್ಗೆ.

ಉಲ್ಲೇಖ: ಕಾನೂನು ಕೋಶದ ಮುಖ್ಯಸ್ಥರ ವರದಿ ದಿನಾಂಕ: 14–10–2022.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಿ ಮತ್ತು ನೌಕರರು ಎಸಗಿರುವ ಕರ್ತವ್ಯಲೋಪಕ್ಕೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯನ್ನು ನಡೆಸಲು ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರನ್ನು ವಿಚಾರಣಾಧಿಕಾರಿಗಳನ್ನಾಗಿ ಹಾಗೂ ಕಾನೂನು ಕೋಶದ ವಿವಿಧ ವೃಂದದ ಅಧಿಕಾರಿಗಳನ್ನು ಮಂಡನಾಧಿಕಾರಿಗಳನ್ನಾಗಿ ನೇಮಕ ಮಾಡಲಾಗುತ್ತಿರುತ್ತದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಾನೂನು ಕೋಶದಲ್ಲಿ ಅಧಿಕ ಕೆಲಸದ ಒತ್ತಡವಿರುವುದರಿಂದ ನಿಗಧಿತ ಸಮಯಕ್ಕೆ ಇಲಾಖಾ ವಿಚಾರಣೆಗಳಿಗಾಗಲಿ ಅಥವಾ ಮಾನ್ಯ ನ್ಯಾಯಾಲಯಗಳಿಗಾಗಲಿ ಹಾಜರಾಗಲು ಸಾಧ್ಯವಾಗದೇ ಇರುವುದನ್ನು ಗಮನಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ಕಾನೂನು ಕೋಶದ ಕೆಲಸಕಾರ್ಯಗಳ ಹಿತದೃಷ್ಟಿಯಿಂದ ಇನ್ನು ಮುಂದೆ ಪಾಲಿಕೆಯ ಇಲಾಖಾ ವಿಚಾರಣೆಗಳಿಗೆ ಕಾನೂನು ಅಧಿಕಾರಿಗಳನ್ನು ಮಂಡನಾಧಿಕಾರಿಗಳನ್ನಾಗಿ ನೇಮಕ ಮಾಡುವುದನ್ನು ಕೈಬಿಡಲಾಗಿದೆ. ಹಾಗೂ ಇಲಾಖಾ ವಿಚಾರಣೆಗಳಿಗೆ ಕರ್ತವ್ಯಲೋಪವೆಸಗಿರುವ ಅಧಿಕಾರಿ / ನೌಕರರು ಕಾರ್ಯನಿರ್ವಹಿಸುತ್ತಿರುವ ಕಛೇರಿಯ ವ್ಯವಸ್ಥಾಪಕರನ್ನಾಗಲಿ ಅಥವಾ ಸಂಬಂಧಪಟ್ಟ ಬಟವಾಡೆ ಅಧಿಕಾರಿಯನ್ನಾಗಲಿ ಮಂಡನಾಧಿಕಾರಿಯನ್ನಾಗಿ ನೇಮಕ ಮಾಡಲು ಆದೇಶಿಸಿದೆ.

ಮೇಲ್ಕಂಡ ಆದೇಶದಂತೆ ಪಾಲಿಕೆಯ ಎಲ್ಲಾ ವಲಯ ಮತ್ತು ಕೇಂದ್ರ ಕಛೇರಿಯ ಶಿಸ್ತು ಪ್ರಾಧಿಕಾರಿಗಳು / ಅಧಿಕಾರಿಗಳು ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿದೆ.

ಮಾನ್ಯ ಮುಖ್ಯ ಆಯುಕ್ತರವರ ಆದೇಶದಂತೆ)

29/10/22
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಪ್ರತಿಯನ್ನು: ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ. 29/10/2022 29.10.22
: ಮಾನ್ಯ ಮುಖ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಕಾರ್ಯದರ್ಶಿ ರವರಿಗೆ ಕಳುಹಿಸಿದೆ.
: ಎಲ್ಲಾ ವಿಶೇಷ ಆಯುಕ್ತರವರುಗಳ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಎಲ್ಲಾ ವಲಯಗಳ ಅಪರ / ಜಂಟಿ ಆಯುಕ್ತರವರುಗಳಿಗೆ ಕಳುಹಿಸಿದೆ.
: ಕಾನೂನು ಕೋಶದ ಮುಖ್ಯಸ್ಥರು ರವರ ಕಛೇರಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಕಳುಹಿಸಿದೆ.
: ಎಲ್ಲಾ ಬಟವಾಡೆ ಅಧಿಕಾರಿಗಳಿಗೆ ಕಳುಹಿಸಿದೆ.
: ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸುತ್ತಾ, ಪಾಲಿಕೆಯ ಅಧಿಕೃತ ವೈಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಮುಲೆಅ/ಮುಲೆಪ/ಎಲ್ಲಾ ವಲಯದ ಉ.ನಿ (ಹಣಕಾಸು) ರವರುಗಳಿಗೆ ಕಳುಹಿಸಿದೆ.
: ಕಛೇರಿ ಪ್ರತಿ.

31/10/2022

ಉಪ ಮುಖ್ಯ ಮಾಹಿತಿ ಅಧಿಕಾರಿ
(ಮಾಹಿತಿ ತಂತ್ರಜ್ಞಾನ) ರವರ ಕಚೇರಿ
ಸಂಖ್ಯೆ: 68/680/22-23
ದಿನಾಂಕ: 31/10/2022
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಎನ್.ಆರ್. ಚೌಕ, ಬೆಂಗಳೂರು